# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 19.03.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಕೆ ಪ್ರಭುದಾಸ್ | ಕಂದಾಯ ವಸೂಲಿಗಾರರು |
| 5 | ಸ್ವಾಮಿ ಎಸ್ ಆರ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 7 | ಹೆಚ್ ನಾಗೇಂದ್ರ ರಾವ್ | ಕಂದಾಯ ವಸೂಲಿಗಾರರು |

-:ನಡಾವಳಿಯ ವರದಿ:-

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ವಿಷಯ ಸಂಖ್ಯೆ:1 ಕೋವಿಡ್-19 ಬಗ್ಗೆ**

ಹಿರಿಯ ಆರೋಗ್ಯ ಪರಿವೀಕ್ಷಕರಾದ ಕೆ.ಶಿವಲಿಂಗಯ್ಯನವರು ಮಾತನಾಡಿ ಕೋವಿಡ್-19ಗೆ ಸಂಬಂಧಿಸಿದ ಅಂಕಿ ಅಂಶಗಳನ್ನು ಸಭೆಯಲ್ಲಿ ತಿಳಿಸಿದರು. ವಿವರಗಳು ಈ ಕೆಳಕಂಡಂತಿವೆ.

**Upto 19/03/2022**

Vaccination

**18+ years**

1st dose - 71349, 2nd dose - 63850

**TOTAL= 135199**

**15-17years**

1st dose - 1192, 2nd dose - 997, Booster dose - 408

**Case details**

Positive cases- 2049, Covid death - 4, Active cases - 0, Home isolation -0, Hospitalised- 0

Scanned with CamScanner

**ವಿಷಯ ಸಂಖ್ಯೆ: 2:-** ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ನೌಕರರು ಮ್ಯಾನ್ ಹೋಲ್‌ನಿಂದ ತೆಗೆದಿರುವ ತ್ಯಾಜ್ಯವನ್ನು ತೆರವುಗೊಳಿಸದಿರುವ ಬಗ್ಗೆ

ಹಿರಿಯ ಆರೋಗ್ಯ ಪರಿವೀಕ್ಷಕರಾದ ಕೆ.ಶಿವಲಿಂಗಯ್ಯನವರು ಮಾತನಾಡಿ ವಾರ್ಡ್ ನಂ.70ರ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ನೌಕರರು ಮ್ಯಾನ್ ಹೋಲ್ ನಿಂದ ತೆಗೆದಿರುವ ತ್ಯಾಜ್ಯವನ್ನು ತೆರವುಗೊಳಿಸದೇ ಹಾಗೇ ಬಿಟ್ಟಿದ್ದು, ಇದರಿಂದಾಗಿ ರೋಗ ರುಜಿನಗಳು ಹರಡುವ ಸಾಧ್ಯತೆ ಇರುತ್ತದೆ. ಆದ್ದರಿಂದ ಸದರಿ ತ್ಯಾಜ್ಯವನ್ನು ತೆರವುಗೊಳಿಸಲು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಸದರಿ ತ್ಯಾಜ್ಯವನ್ನು ತೆರವುಗೊಳಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಿಬ್ಬಂದಿಗೆ ತಿಳಿಸಿದರು.

- **ವಿಷಯ ಸಂಖ್ಯೆ: 3:-** ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡಿರುವ ಬಗ್ಗೆ:

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್‌ನ ಹಲವು ಕಡೆಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ರಸ್ತೆ ಅಗೆದಿದ್ದು Restoration ಮಾಡಿರುವುದಿಲ್ಲ ಎಂಬುದಾಗೀ ದೂರುಗಳು ಬಂದಿದ್ದು, ಈ ಬಗ್ಗೆ ತುರ್ತಾಗಿ Restoration ಅನ್ನು ತುರ್ತಾಗಿ ಮಾಡಲು ವಲಯ ಆಯುಕ್ತರು ತಿಳಿಸಿರುತ್ತಾರೆ. ಅದರಂತೆ ಕ್ರಮವಹಿಸಲು ನೋಡಲ್ ಅಧಿಕಾರಿರವರು ಬಿ.ಡಬ್ಲ್ಯೂ.ಎಸ್.ಎಸ್.ಬಿ & ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ಸದಸ್ಯ ಕಾರ್ಯದರ್ಶಿ** | **ವಾರ್ಡ್ ಸಮಿತಿ ಅಧ್ಯಕ್ಷರು** |
| **ಹಾಗೂ ಸಹಾಯಕ ಅಭಿಯಂತರರು** | **ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ** |
| **ವಾರ್ಡ್ 70, ರಾಜಗೋಪಾಲ ನಗರ** | **ವಾರ್ಡ್ ನಂ.70, ರಾಜಗೋಪಾಲ ನಗರ** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.

Scanned with CamScanner